ಳ ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

೧೯೮೭ನೇ ಇಸವಿಯ ಕರ್ನಾಟಕ ವಿಧಾನ ಮಂಡಲದ ವೇತನ, ನಿವೃತ್ತಿ ವೇತನ ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಮಂತ್ರಿಗಳು).— ಮಾನ್ಯ ಅಧ್ಯಕ್ಷರೆ, ೧೯೮೭ನೇ ಇಸವಿಯ ಕರ್ನಾಟಕ ವಿಧಾನ ಮಂಡಲದ ವೇತನ, ನಿವೃತ್ತಿ ವೇತನ ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವನ್ನು ಮಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೆ, ಹಿಂದೆ ಈ ವಿಧೇಯಕವನ್ನು ತಿದ್ದುಪಡಿ ಮಾಡುವ ಸಂದರ್ಭದಲ್ಲಿ ಈ ದಿನ ತಿದ್ದುಪಡಿಗೆ ತಂದಿರತಕ್ಕ ವಿಷಯ ಬಿಟ್ಟು ಹೋಗಿತ್ತು. ಅದನ್ನು ಸೇರಿಸಬೇಕೆಂಬುದಾಗಿ ತಿದ್ದುಪಡಿಯನ್ನು ತರಲಾಗಿದೆ. ಅಂದರೆ ೫೦೦ ರೂಪಾಯಿಗಳು ಇದ್ದುದನ್ನು ೭೫೦ ರೂಪಾಯಿಗಳೆಂದು ಮಾಡಬೇಕೆಂದು ಹಿಂದೆ ತಿದ್ದುಪಡಿಯನ್ನು ಮಾಡತಕ್ಕ ಸಂದರ್ಭದಲ್ಲಿ ಮಾಡಬೇಕಾಗಿತ್ತು. ಆದರೆ inadvertantly that could not be done. It was missing. Now it is sought to be included. ಇದನ್ನು ಮಾನ್ಯ ಸಭೆ ತನ್ನ ಒಪ್ಪಿಗೆಯನ್ನು ನೀಡಬೇಕೆಂದು ತಮ್ಮ ಮೂಲಕ ಮನವಿ ಮಾಡಿ ಕೊಳ್ಳುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೮೭ನೇ ಇಸವಿಯ ಕರ್ನಾಟಕ ವಿಧಾನ ಮಂಡಲದ ವೇತನ, ನಿವೃತ್ತಿ ವೇತನ ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ—೨

ಅಧ್ಯಕ್ಷರು.—ಖಂಡ ೨ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ೨ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ ೧ ೧ತ್ಯಾದಿ

ಅಧ್ಯಕ್ಷರು.—ಮೊದಲನೇಯ ಪ್ರಸ್ತಾವನೆಯೆಂದರೆ ಖಂಡ ಹೆಸರು ಮತ್ತು ಅವತರಿಣಿಕೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ

ಪ್ರಸ್ತಾವನ್ನು ಅಂಗೀಕರಿಸಲಾಯಿತು

(ಮೊದಲನೆ ಖಂಡ, ಥೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಂಗೊಳಿಸುವ ಸೂಕ್ಷ್ಮ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು).—೧೯೮೬ನೇ ಇಸವಿಯ ಕರ್ನಾಟಕ ವಿಧಾನಮಂಡಲದ ವೇತನ, ನಿವೃತ್ತಿವೇತನ ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೮೬ನೇ ಇಸವಿಯ ಕರ್ನಾಟಕ ವಿಧಾನ ಮಂಡಲದ ವೇತನ, ನಿವೃತ್ತಿ ವೇತನ ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಂಸೂದೆಗ ಒಪ್ಪಿಗೆ ನೀಡಲಾಯಿತು

ಕರ್ನಾಟಕ ಭಿಕ್ಷಾಟನಾ (ತಿದ್ದುಪಡಿ) ವಿಧೇಯಕ—೧೯೮೮

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಮಂತ್ರಿ).—ಮಾನ್ಯ ಅಧ್ಯಕ್ಷರೇ, ಕರ್ನಾಟಕ ಭಿಕ್ಷಾಟನಾ (ತಿದ್ದುಪಡಿ) ವಿಧೇಯಕ-೧೯೮೮ನ್ನು ಪರ್ಯಾಲೋಚಿಸಬೇಕೆಂದು ಕೊರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.—ಅಧ್ಯಕ್ಷರೇ, ಈಗಿನ ಕಾನೂನು ಪ್ರಕಾರ ಸರ್ಕಾರಕ್ಕೆ ಇರತಕ್ಕ ಅಧಿಕಾರವನ್ನು ಛೇರ್ಮನ್ನರಿಗೆ ಕೊಡುತ್ತಿದ್ದೇವೆ. ಸಭೆಯು ಇದನ್ನು ಒಪ್ಪುತ್ತದೆಂದು ನನ್ನ ಭಾವನೆ.

ಅಧ್ಯಕ್ಷರು.—ಪ್ರಸ್ತಾಪ ಏನೆಂದರೆ ''ಕರ್ನಾಟಕ ಭಿಕ್ಷಾಟನಾ (ತಿದ್ದುಪಡಿ) ವಿಧೇಯಕ-೧೯೮೮ವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ೨ ಮತ್ತು ೩

ಅಧ್ಯಕ್ಷರು.—''ಖಂಡ ೨ ಮತ್ತು ೩ ಈ ವಿಧೇಯಕದ ಅಂಗವಾಗಿರುತ್ತವೆ.

ಪ್ರಸ್ತಾವೆ ಅಂಗೀಕರಿಸಲ್ಪಟ್ಟಿತು

(ಖಂಡ ೨ ಮತ್ತು ೩ ಈ ವಿಧೇಯಕಕ್ಕೆ ಸೇರಿಸಲ್ಪಟ್ಟವು)

ಖಂಡ ೧ ಇತ್ಯಾದಿ

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''ಮೊದಲ ಖಂಡ ಧೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವವನ್ನು ಅಂಗೀಕರಿಸಲಾಯಿತು

(ಮೊದಲನೇ ಖಂಡ, ಧೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)